736

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: M/s MSPL Limited ರವರಿಗೆ ಬಳ್ಳಾರಿ ಜಿಲ್ಲೆಯ, ಹೊಸಪೇಟೆ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 16 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 17.4 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಿ, ಯೋಜನೆಯ ಅನುಷ್ಠಾನಕ್ಕೆ ಕಾಲಾವಕಾಶ ವಿಸ್ತರಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 271 ಎನ್‌ಸಿಇ 2019, ದಿನಾಂಕ:11.12.2019
2. ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 271 ಎನ್‌ಸಿಇ 2019, ದಿನಾಂಕ:03.09.2020
3. ಸರ್ಕಾರದ ಪತ್ರ ಸಂಖ್ಯೆ:ಎನರ್ಜಿ 271 ಎನ್‌ಸಿಇ 2019, ದಿನಾಂಕ:11.11.2020
4. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರ ಪತ್ರ ಸಂಖ್ಯೆ:KREDL/08/MSpL-16 MW to 17.4/Ballari/F-1798/2021/1805, ದಿನಾಂಕ:29.05.2021.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದನ್ವಯ M/s MSPL Gases Limited ಕಂಪನಿಗೆ ಬಳ್ಳಾರಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ವಿವಿಧ ಆದೇಶಗಳನ್ವಯ ಮಂಜೂರಾಗಿರುವ 8.8 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಾಗೂ M/s Ramgad Minerals & Mining (P) Limited ಕಂಪನಿಗೆ ಬಳ್ಳಾರಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ವಿವಿಧ ಆದೇಶಗಳನ್ವಯ ಮಂಜೂರಾಗಿರುವ 6.5 ಮೆ.ವ್ಯಾ. ಒಟ್ಟು 15.3 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು M/s MSPL Limited ಕಂಪನಿಗೆ ವರ್ಗಾಯಿಸಿ, ಸದರಿ ಸಾಮರ್ಥ್ಯವನ್ನು 16 ಮೆ.ವ್ಯಾ.ಗೆ ಹೆಚ್ಚಿಸಿ ಆದೇಶಿಸಲಾಗಿತ್ತು. ತದನಂತರ ಸದರಿ ಸಾಮರ್ಥ್ಯವನ್ನು ಅನುಷ್ಠಾನಗೊಳಿಸಲು ದಿನಾಂಕ:01.10.2019ರಿಂದ 31.12.2020 ರವರೆಗೆ ಕಾಲಾವಕಾಶವನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ವಿಸ್ತರಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದನ್ವಯ M/s MSPL Limited ಕಂಪನಿಗೆ ಬಳ್ಳಾರಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 16 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು Covid-19 Lockdown ಅವಧಿಯನ್ನು Force Majeure ಪರಿಗಣಿಸಿ ದಿನಾಂಕ:01.01.2021ರಿಂದ 30.06.2021 ರವರೆಗೆ ಶುಲ್ಕ ರಹಿತವಾಗಿ ಕಾಲಾವಧಿ ವಿಸ್ತರಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (4)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರು M/s MSPL Limited ಕಂಪನಿಗೆ ಬಳ್ಳಾರಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 16 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು ಸದರಿ ಸ್ಥಳದಲ್ಲಿಯೇ 17.4 ಮೆ.ವ್ಯಾ.ಗೆ ಹೆಚ್ಚಿಸಲು ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ದಿನಾಂಕ:01.07.2021 ರಿಂದ 31.12.2021ರ ವರೆಗೆ ಕಾಲಾವಕಾಶ ವಿಸ್ತರಿಸಲು ನಿಗಧಿತ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸಿಕೊಂಡಿರುವುದಾಗಿ ತಿಳಿಸುತ್ತಾ, M/s MSPL Limited ಕಂಪನಿಗೆ ಬಳ್ಳಾರಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 16 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳದಲ್ಲಿಯೇ ಸದರಿ ಸಾಮರ್ಥ್ಯವನ್ನು 17.4 ಮೆ.ವ್ಯಾ.ಗೆ ಹೆಚ್ಚಿಸಿ, ಯೋಜನೆಯನ್ನು ಅನುಷ್ಠಾನಗೊಳಿಸಲು ದಿನಾಂಕ:31.12.2021ರ ವರೆಗೆ ಕಾಲಾವಕಾಶ ವಿಸ್ತರಿಸಬಹುದೆಂಬ ಅಭಿಪ್ರಾಯದೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 129 ಎನ್‌ಸಿಇ 2021**
**ಬೆಂಗಳೂರು, ದಿನಾಂಕ:24.06.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s MSPL Limited ಕಂಪನಿಗೆ ಬಳ್ಳಾರಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 16 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ

...2

ಸ್ಥಳದಲ್ಲಿಯೇ ಸದರಿ ಸಾಮರ್ಥ್ಯವನ್ನು 17.4 ಮೆ.ವ್ಯಾ.ಗೆ ಹೆಚ್ಚಿಸಿ, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ದಿನಾಂಕ:01.07.2021 ರಿಂದ 31.12.2021ರವರೆಗೆ ಈ ಕೆಳಕಂಡ ಷೆಡ್ಯೂಲ್ ಹಾಗೂ ಷರತ್ತುಗಳಿಗೊಳಪಟ್ಟು ಕಾಲಾವಕಾಶ ವಿಸ್ತರಿಸಿ ಆದೇಶಿಸಿದೆ.

## Geographical area description for 17.4 MW capacity Wind Power Project of M/s MSPL Limited

| Sl. No. | Geographical area description of the project | Near by villages of the proposed & District | Sanctioned capacity in MW | Enhance ment proposed in MW | Total capacity in MW |
|---|---|---|---|---|---|
| 1 | North West to South East oriented ridge of about 1.5+0.5 Kms in length located on South East of Vainkunta PWD Guesthouse near Tungabadra Dam covered in Sy.No.571 of Amaravathi village and has 740 m elevation covered between<br><br>**Latitude:** 15°14'32.78"<br>15°15'16.43"N,<br>**Longitude:**76°20'57.30"<br>76°21'32.28"E | Amaravathi/ Hospet/ Ballari | 16 MW | 1.4 MW | 17.4 MW (7 Nos X 2200 kW + 1 No X 2000 kW |
| | N-W to S-E oriented ridge of about 1.6 km in length located on west of Rajpura village covered in Sy.No.115A of Jumbhunathahalli and has 730 m elevation covered between<br><br>**Latitude:**15°18'30"- 19"N,<br>**Longitude:** 76°22'30"- 23"E | Jumbhunathnahall –Hospet/Ballari | | | |
| | A small contiguous ridge oriented in NW-SE direction situated in the RH side of Chitradurga-Hospet Road. This site is located close by to Tungabhadra Reservoir. The Project can be developed subject to clearance of Tungabhadra development Authority and National Highway. The proposed area is covered in the following Geographical co-ordinated:<br><br>Latitude:15°13'58"-15°14'22"N,<br>Longitude: 76°21'44"- 76°22'18"E | Rajapura and Vyasanakere / Hospet/Ballari | | | |
| | **Total** | | **16 MW** | **1.4 MW** | **17.4 MW** |

...3

ಷರತ್ತುಗಳು

1. M/s MSPL Limited ಕಂಪನಿಯು ಯೋಜನೆಯ ಸಾಮರ್ಥ್ಯ ಹೆಚ್ಚಳ ಹಾಗೂ ವರ್ಗಾವಣೆಗೆ ಸಂಬಂಧಿಸಿದಂತೆ ನಿಯಮಾನುಸಾರ ನಿಗದಿಪಡಿಸಿರುವ ಶುಲ್ಕಗಳನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

2. M/s MSPL Limited ಕಂಪನಿಯು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ವೀಲಿಂಗ್ ಮೂಲಕ ಸ್ವಂತ ಬಳಕೆ (Captive) ಮಾಡಿಕೊಳ್ಳುವ ವಿಷಯದಲ್ಲಿ ಕೆಪಿಟಿಸಿಎಲ್/ಎಸ್ಕಾಂಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

3. ಉಳಿದಂತೆ, ಸರ್ಕಾರದ ಆದೇಶ ಸಂಖ್ಯೆ:ಎನರ್ಜಿ 271 ಎನ್‌ಸಿಇ 2019, ದಿನಾಂಕ:11.12.2019ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ.

4. ಈ ಆದೇಶವನ್ನು ರದ್ದುಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

N. mangalagowri 24/6/21
(ಎನ್.ಮಂಗಳಗೌರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
24/6/21

ಇವರಿಗೆ:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರ್ಗಿ.
5. ಜಿಲ್ಲಾಧಿಕಾರಿ, ಬಳ್ಳಾರಿ ಜಿಲ್ಲೆ, ಬಳ್ಳಾರಿ.
6. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ಪ್ರಾದೇಶಿಕ ವಿಭಾಗ, ಬಳ್ಳಾರಿ ಜಿಲ್ಲೆ, ಬಳ್ಳಾರಿ.
8. M/s MSPL Limited, 26/20, ABSHOT Layout, Sankey Road, Near Windsor Manor Hotel, Bengaluru- 560001.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು.
10. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ಬೆಂಗಳೂರು.
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.